ಚಾಮುಂಡೇಶ್ವರಿ ವಿದ್ಯುಚ್ಛಕ್ತಿ ಸರಬರಾಜು
ನಿಗಮ ನಿಯಮಿತ,
(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ)
ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ರವರ ಕಛೇರಿ
ಕಾರ್ಯ ಮತ್ತು ಪಾಲನ ಉಪ ವಿಭಾಗ
ಚಾ.ವಿ.ಸ.ನಿ.ನಿ. ಬೆಟ್ಟದಪುರ-571102
Telephone No : 08223-275464

CHAMUNDESHWARI ELECTRICITY
SUPPLY CORPORATION LIMITED
*(A Government of Karnataka Undertaking)*
O/o Assistant Executive Engineer (Ele)
O & M Sub division
CESC, Bettadapura-571 102
Website: www.cescmysore.org
E-mail: aeecescbpura@gmail.com
Company Identity Number[CIN] :- U40109KA2004SGC035177

No: AEE/AE(T)/CESC/BPura/2023-24/ 20 Date: 05-04-2023

# ಸಭೆ ನಡಾವಳಿಗಳು

ದಿನಾಂಕ 23.03.2023 ರಂದು ಮಧ್ಯಾಹ್ನ 3 ಗಂಟೆಗೆ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಿಭಾಗ, ಚಾ.ವಿ.ಸ.ನಿ.ನಿ ಕೆ.ಆರ್. ನಗರ ರವರ ಅಧ್ಯಕ್ಷತೆಯಲ್ಲಿ ನಡೆದ ಬೆಟ್ಟದಪುರ ಕಾರ್ಯ ಮತ್ತು ಪಾಲನ ಉಪವಿಭಾಗದ ವ್ಯಾಪ್ತಿಯ ಜನ ಸಂಪರ್ಕ ಸಭೆಯ ನಡಾವಳಿಗಳು.

<u>ಸಭೆಯಲ್ಲಿ ಹಾಜರಿದ್ದವರು,</u>

1. ಶ್ರೀ ಪ್ರದೀಪ್ ಜಿ, ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಿಭಾಗ, ಚಾ.ವಿ.ಸ.ನಿ.ನಿ. ಕೆ.ಆರ್.ನಗರ.
2. ಶ್ರೀ ಪ್ರಶಾಂತ್ ಕುಮಾರ್, ಪ್ರಭಾರ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ಉಪವಿಭಾಗ ಚಾ.ವಿ.ಸ.ನಿ.ನಿ. ಬೆಟ್ಟದಪುರ.
3. ಶ್ರೀ ನವೀನ್ ವಿ.ಎನ್, ಹಿರಿಯ ಸಹಾಯಕ, ಕಾರ್ಯ ಮತ್ತು ಪಾಲನಾ ಉಪ ವಿಭಾಗ ಚಾವಿಸನಿನಿ, ಬೆಟ್ಟದಪುರ.
4. ಶ್ರೀ ರವಿ. ಡಿ. ಹೆಚ್ ಕಿರಿಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ಶಾಖೆ, ಸೀಗೂರು.
5. ಶ್ರೀ ಗಣೇಶ್ ಎ ಸಿ ಪ್ರಭಾರ ಕಿರಿಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ಶಾಖೆ, ಕಣಗಾಲು.
6. ಶ್ರೀ ಭೋಜೇಶ್, ಕಿರಿಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ಶಾಖೆ. ರಾವಂದೂರು
7. ಶ್ರೀ ಹರುವೇಗೌಡ ಹೆಚ್, ಕಿರಿಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ಶಾಖೆ. ಕಿತ್ತೂರು.

ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಿಭಾಗ ಚಾ.ವಿ.ಸ.ನಿ.ನಿ, ಕೆ.ಆರ್.ನಗರ ರವರು ಸಭೆಯಲ್ಲಿ ಹಾಜರಿದ್ದ ಗ್ರಾಹಕರಿಗೆ ಹಾಗೂ ಅಧಿಕಾರಿ/ನೌಕರರಿಗೆ ಸ್ವಾಗತಿಸಿದರು. ಸಭೆಯಲ್ಲಿ ಹಾಜರಿದ್ದ ಗ್ರಾಹಕರ ಸಲಹೆ/ದೂರುಗಳನ್ನು ಆಲಿಸಿ ಈ ಕೆಳಕಂಡಂತೆ ಕ್ರಮವನ್ನು ಕೈಗೊಳ್ಳಲಾಯಿತು.

| ಕ್ರ.ಸಂ | ಗ್ರಾಹಕರ ಹೆಸರು ಮತ್ತು ವಿಳಾಸ | ದಾಖಲಾದ ದೂರು/ಸಲಹೆಯ ವಿವರ | ಅನುಪಾಲನಾ ಕ್ರಮ |
|---|---|---|---|
| 1 | ಶ್ರೀ ಕೃಷ್ಣೇಗೌಡ ಎ.ಜಿ.ಕಾವಲು ಗ್ರಾಮ | ಸದರಿಯವರ ಪರಿವರ್ತಕವು 25 ಕೆ.ವಿ.ಎ ಇದ್ದು ಅದರಲ್ಲಿ 6 ಸಂಖ್ಯೆಯ ಐ.ಪಿ ಸ್ಥಾವರಗಳು ಇದ್ದು ಅವರಿಗೆ ಮತ್ತೊಂದು ಪರಿವರ್ತಕವು ಬೇಕೆಂದು ಕೋರಿರುತ್ತಾರೆ. | ಶಾಖಾಧಿಕಾರಿ ಸೀಗೂರು ರವರಿಗೆ UNIP-TTK ಯೋಜನೆಯಡಿಯಲ್ಲಿ ಅಂದಾಜು ಪಟ್ಟಿ ತಯಾರಿಸಿ ವಿಭಾಗ ಕಛೇರಿಗೆ ಸಲ್ಲಿಸಲು ಸೂಚಿಸಿದರು. |
| 3 | ಕೆಂಪಣ್ಣ ತರಿಕಲ್ಲು ಗ್ರಾಮ | ನಮ್ಮ ಜಮೀನಿನ ಮೇಲೆ ನನ್ನ ತಮ್ಮಂದಿರು ವಿದ್ಯುತ್ ಮಾರ್ಗವನ್ನು ಎಳೆದಿದ್ದು ವೈರ್ ಜೋತುಬಿದ್ದಿರುತ್ತದೆ. ಆದ್ದರಿಂದ ಸದರಿ ಮಾರ್ಗವನ್ನು ಸ್ಥಳಾಂತರಿಸಿಕೊಡಲು ಕೋರಿದರು. | ಶಾಖಾಧಿಕಾರಿ ಬೆಟ್ಟದಪುರ ರವರಿಗೆ ಜೋತುಬಿದ್ದಿರುವ ಮಾರ್ಗವನ್ನು ಮರುಸ್ಥಾಪಿಸಿಕೊಡಲು ಮತ್ತು ಮಾರ್ಗವನ್ನು ಸ್ಥಳಾಂತರಿಸಲು ಸ್ವಯಂ ಕಾರ್ಯನಿರ್ವಹಣೆ ಯೋಜನೆಯಡಿಯಲ್ಲಿ ಅಂದಾಜು ಪಟ್ಟಿ ತಯಾರಿಸಲು ಹಾಗೂ ಸ್ವಯಂ ಕಾರ್ಯನಿರ್ವಹಣೆ ಅಡಿಯಲ್ಲಿ ಕೆಲಸ ನಿರ್ವಹಿಸಿಕೊಳ್ಳಲು ಸಭೆಯಲ್ಲಿ ತಿಳಿಸಿದರು. |



Scanned with OKEN Scanner

| | | | |
|---|---|---|---|
| 4 | ಶ್ರೀ ಮಹದೇವ ಭೋಗನಹಳ್ಳಿ ಗ್ರಾಮ | ಶ್ರೀ ಮಹದೇವ ಭೋಗನಹಳ್ಳಿ ಗ್ರಾಮ ರವರು ನಮ್ಮ ಮನೆ ಮೇಲೆ ವಿದ್ಯುತ್ ತಂತಿಯು ಹಾದು ಹೋಗಿದ್ದು. ಅದನ್ನು ಬದಲಾಯಿಸಿಕೊಡುವಂತೆ ಸಭೆಯಲ್ಲಿ ಕೇಳಕೊಂಡರು | ರಾವಂದೂರು ಶಾಖಾಧಿಕಾರಿ ರವರಿಗೆ ಸ್ಥಳ ಪರಿಶೀಲಿಸಿ. ಅಂದಾಜು ಪಟ್ಟಿಯನ್ನು ತಯಾರಿಸಿ. ಸ್ವಯಂ ಕಾರ್ಯನಿರ್ವಹಣೆ ಯೋಜನೆಯಡಿಯಲ್ಲಿ ಕಾಮಗಾರಿಯನ್ನು ಕೈಗೊಳ್ಳಲು ಕ್ರಮ ವಹಿಸುವಂತೆ ಸಭೆಯಲ್ಲಿ ಸೂಚಿಸಲಾಯಿತು. |
| 3 | ಗೋವಿಂದೇಗೌಡ ಕೆಳಗನಹಳ್ಳಿ ಗ್ರಾಮ | ಕೆಳಗನಹಳ್ಳಿ ಗ್ರಾಮದಲ್ಲಿ ನಾನು ಒಂದು ಕೊಳವೆ ಬಾವಿಯನ್ನು ಕೊರೆಸಿದ್ದು ಆ ಕೊಳವೆ ಬಾವಿಗೆ ವಿದ್ಯುತ್ ಸಂಪರ್ಕವನ್ನು ನಿಡುವಂತೆ ಸಭೆಯಲ್ಲಿ ಕೋರಿದರು. | ಶಾಖಾಧಿಕಾರಿ ರಾವಂದೂರು ರವರಿಗೆ ಸದರಿ ಕೊಳವೆಬಾವಿಯನ್ನು ಸಕ್ರಮ ಮಾಡಿಸಿಕೊಂಡು ವಿದ್ಯುತ್ ಸಂಪರ್ಕವನ್ನು ನೀಡುವಂತೆ ಸಭೆಯಲ್ಲಿ ಸೂಚಿಸಿದರು. |

ಸಭೆಯ ಕೊನೆಯಲ್ಲಿ ಕಾರ್ಯನಿರ್ವಾಹಕ ಇಂಜಿನಿಯರ್(ವಿ). ರವರು ವಿದ್ಯುತ್ ಗ್ರಾಹಕರಿಂದ ಕೇಳ ಬಂದಂತಹ ದೂರುಗಳು ಹಾಗೂ ಸಲಹೆಗಳ ಬಗ್ಗೆ ಸವಿವರವಾಗಿ ಮಾತನಾಡಿ ಸಭೆಯಲ್ಲಿಯೇ ಕೆಲವು ಅಹವಾಲುಗಳಗೆ ಸಂಭಂದಿಸಿದಂತೆ ಪರಿಹಾರ ಮಾರ್ಗೋಪಾಯಗಳನ್ನು ತಿಳಸಿ ಹಾಗೂ ಇತರೆ ಅಹವಾಲುಗಳಗೆ ಸಂಬಂಧಪಟ್ಟಂತೆ ಶಾಖಾಧಿಕಾರಿಗಳು ಸ್ಥಳ ಪರೀಶಿಲಿಸಿ ನಿಯಮಾನುಸಾರ ಕ್ರಮ ಕೈಗೊಂಡು ತೆಗೆದುಕೊಂಡ ಕ್ರಮದ ಬಗ್ಗೆ ಕಟ್ಟುನಿಟ್ಟಾಗಿ ಅನುಪಾಲನಾ ವರದಿ ನೀಡುವಂತೆ ಸೂಚಿಸಿ ಸಭೆಯಲ್ಲಿ ಹಾಜರಿದ್ದ ಎಲ್ಲಾ ವಿದ್ಯುತ್ ಗ್ರಾಹಕರಿಗೆ ಧನ್ಯವಾದಗಳನ್ನು ತಿಳಸಿ ಸಭೆಯನ್ನು ಮುಕ್ತಾಯಗೊಳಸಿದರು.

ತಮ್ಮ ವಿಶ್ವಾಸಿ

ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ)
ಕಾರ್ಯ ಮತ್ತು ಪಾಲನಾ ಉಪ ವಿಭಾಗ
ಚಾ.ವಿ.ಸ.ನಿ.ನಿ., ಬೆಟ್ಟದಪುರ

ಪ್ರತಿಗಳು:-

1. ಅಧೀಕ್ಷಕ ಇಂಜಿನಿಯರ್(ವಿ). ಕಾರ್ಯ ಮತ್ತು ಪಾಲನ ವೃತ್ತ ಚಾ.ವಿ.ಸ.ನಿ.ನಿ. ಮೈಸೂರು ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಕಾರ್ಯನಿರ್ವಾಹಕ ಇಂಜಿನಿಯರ್(ವಿ). ಚಾ.ವಿ.ಸ.ನಿ.ನಿ. ಕಾರ್ಯ ಮತ್ತು ಪಾಲನ ವಿಭಾಗ, ಕೆ.ಆರ್ ನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಶಾಖಾಧಿಕಾರಿಗಳು ಕಾರ್ಯ ಮತ್ತು ಪಾಲನ ಶಾಖೆ ಚಾವಿಸನಿನಿ. ಬೆಟ್ಟದಪುರ/ ಕಿತ್ತೂರು/ ರಾವಂದೂರು/ ಕಣಗಾಲು/ ಸೀಗೂರು ರವರ ಮಾಹಿತಿಗಾಗಿ ಹಾಗೂ ಸಭೆಯಲ್ಲಿ ದಾಖಲಾದ ದೂರುಗಳನ್ನು ತ್ವರಿತವಾಗಿ ಸರಿಪಡಿಸಿ ಅನುಪಾಲನ ವರದಿಯನ್ನು ಸಲ್ಲಿಸಲು ಸೂಚಿಸಿದೆ.
4. ಕಛೇರಿ ಪ್ರತಿ.



Scanned with OKEN Scanner